**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.746/2022**

| | | |
|---|---|---|
| ಸಾಕ್ಷಿದಾರರ ಹೆಸರು | : ಎಂ.ಎಂ. ಅಶೋಕ್ | ಪ್ರಾಸಾ-2 |
| ತಂದೆಯ ಹೆಸರು | : ಲೇಟ್ ಎಂ.ಟಿ ಮಲ್ಲೇಗೌಡ | ಚಾಸಾ-11 |
| ವಯಸ್ಸು | : 51 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಎ.ಎಸ್.ಐ. | ದಿನಾಂಕಃ 21.02.2026. |
| ವಾಸಸ್ಥಳ | : ಮೂಡಿಗೆರೆ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು 2019 ರಿಂದ 2024 ರವರೆಗೂ ಕಳಸ ಪೋಲಿಸ್ ಠಾಣೆಯಲ್ಲಿ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.05.06.2022 ರಂದು ಠಾಣಾ SHO ಕರ್ತವ್ಯದಲ್ಲಿರುವಾಗ ಕಳಸದ CHC ಆಸ್ಪತ್ರೆಯಲ್ಲಿ ಚಾಸಾ-1 ರವರ ಹೇಳಿಕೆಯನ್ನು ಸ.6.00 ರಿಂದ 6.30 ರ ಸಮಯದವರೆಗೂ ಪಡೆದುಕೊಂಡಿರುತ್ತೇನೆ. ನಂತರ ಸ.6.45 ರ ಸಮಯಕ್ಕೆ ಠಾಣೆಗೆ ಹಾಜರಾಗಿ ಠಾಣಾ ಮೊ.ನಂ.36/2022 ರ ಕಲಂ 504, 324, 506 ಸಹವಾಚಕ ಕಲಂ 34 ರ ಐ.ಪಿ.ಸಿ ರಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ನಂತರ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದಿ.06.06.2022 ರಂದು ಕಲಂ 41 ಎ Cr.P.C. ರಡಿಯಲ್ಲಿ ಆರೋಪಿಗಳಿಗೆ ನೋಟೀಸನ್ನು ಜಾರಿ ಮಾಡಿರುತ್ತೇನೆ. ದಿ.07.06.2022 ರಂದು ಬೆ.10.30 ರ ಸಮಯಕ್ಕೆ ಹಾಜರಾಗಬೇಕು ಎಂದು ಚಾಸಾ-3 ಮತ್ತು 4 ರವರಿಗೆ ನೋಟಿಸನ್ನು ಜಾರಿ ಮಾಡಿರುತ್ತೇನೆ. ಅದೇ ದಿನ ಬೆ.10.30 ರಿಂದ 11.30 ರವರೆಗೂ ಸ್ಥಳ ಮಹಜರ್ ನ್ನು ಚಾಸಾ-3 ಮತ್ತು 4 ರವರ ಸಮಕ್ಷಮ, ಚಾಸಾ-2 ರವರು ಸ್ಥಳ ತೋರಿಸಿದ ಮೇರೆಗೆ ಸ್ಥಳ ಮಹಜರ್ ನ್ನು ಜರುಗಿಸಿರುತ್ತೇನೆ. ಸದರಿ ಸಮಯದಲ್ಲಿ ಚಾಸಾ-2 ರವರು ತೋರಿಸಿದ ಮೇರೆಗೆ ಎರಡು 2 ½ ಅಡಿ ಉದ್ದದ ಒಂದು ಕಬ್ಬಿಣದ ರಾಡನ್ನು ಅಮಾನತುಪಡಿಸಿಕೊಂಡಿರುತ್ತೇನೆ. ನಂತರ ಅದಕ್ಕೆ ಪಂಚರ ಸಹಿಯನ್ನು ಪಡೆದುಕೊಂಡು ಅದನ್ನು ಠಾಣಾ ಮಾಲುಪಟ್ಟಿ ಸಂಖ್ಯೆ 45/2022 ರಲ್ಲಿ ನಮೂದಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಮಹಜರ್ ಸಮಯದಲ್ಲಿ ಫೋಟೋವನ್ನು ತೆಗೆಯಲಾಗಿರುತ್ತದೆ.

ಅದೇ ದಿನ ಚಾಸಾ-2, 5 ರಿಂದ 8 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಚಾಸಾ-10 ರವರಿಂದ ಕಲಂ 65 ಬಿ ರಡಿಯ ದೃಢೀಕೃತ ಪ್ರತಿಯನ್ನು ಪಡೆದುಕೊಂಡಿರುತ್ತೇನೆ. ನಂತರ ಮುಂದಿನ ತನಿಖೆಯ ಸಂಬಂಧ ಪ್ರಕರಣದ ಕಡತವನ್ನು ಚಾಸಾ-12 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.05.06.2022 ರಂದು ದಾಖಲಿಸಿಕೊಂಡ ಪ್ರಥಮ ವರ್ತಮಾನ ವರದಿ ಮತ್ತು ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪ್ರಥಮ ವರ್ತಮಾನ ವರದಿಯನ್ನು ನಿಪಿ-2 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು

ಗುರುತಿಸಲಾಯಿತು. ಸಾಕ್ಷಿಯು ದಿ.07.06.2022 ರಂದು ಬರವಣಿಗೆ ಮಾಡಿದ ಮಹಜರ್ ಮತ್ತು ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಹಜರ್ ನ್ನು ನಿಪಿ-3 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸದರಿ ಸಮಯದಲ್ಲಿ ತೆಗೆದ ಫೋಟೋವನ್ನು ನಿಪಿ-4 ರಿಂದ 6, ಸಿಡಿಯನ್ನು ನಿಪಿ-7 ಮತ್ತು ಕಲಂ 65 ಬಿ ರಡಿಯ ಪ್ರತಿಯನ್ನು ನಿಪಿ-8 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಒಂದು ಕಬ್ಬಿಣದ ರಾಡನ್ನು ಗುರುತಿಸಿದ ಮೇರೆಗೆ ಸದರಿ ರಾಡನ್ನು ಎಂ.ಒ.1 ಎಂದು ಗುರುತಿಸಲಾಯಿತು. ಆರೋಪಿಯು ಗೈರು ಹಾಜರಿದ್ದು ಅವರ ಗುರುತುವಿಕೆಯಲ್ಲಿ ತಕರಾರು ಇಲ್ಲ ಎಂದು ಆರೋಪಿ ಪರ ವಕೀಲರು ತಿಳಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್.ಕೆ.ಡಿ. ವಕೀಲರು ಶ್ರೀ ಎಂ.ಪಿ.ಎ.ಆರ್. ವಕೀಲರ ಪರವಾಗಿಃ**

ದಿ.05.06.2022 ರಂದು ನಾನು ಠಾಣಾ SHO ಆಗಿ ಕರ್ತವ್ಯ ನಿರ್ವಹಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಕಳಸದ CHC ಆಸ್ಪತ್ರೆಗೆ ಹೋಗಿ ಚಾಸಾ-1 ರವರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಮೇರೆಗೆ ಆರೋಪಿಗಳ ವಿರುದ್ಧ ನಿಪಿ-2 ರಂತೆ ಪ್ರಕರಣನ್ನು ದಾಖಲಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ-3 ಮತ್ತು 4 ರವರಿಗೆ ಯಾವುದೇ ನೋಟೀಸನ್ನು ಜಾರಿ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-2 ರವರು ಸ್ಥಳ ತೋರಿಸಿದಂತೆ ನಿಪಿ-3 ರಂತ ಮಹಜರ್ ಕ್ರಮವನ್ನು ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ಮಹಜರ್ ಕಾಲದಲ್ಲಿ ಎಂ.ಒ.1 ನ್ನು ವಶಪಡಿಸಿಕೊಂಡು ಸಾಕ್ಷಿದಾರರಿಂದ ಪಡೆದುಕೊಂಡ ಸಹಿಯು ಈ ದಿನ ನ್ಯಾಯಾಲಯದ ಮುಂದೆ ಕಂಡು ಬರುತ್ತಿಲ್ಲ ಎಂದರೆ ಸರಿ. ಮಹಜರ್ ಕಾಲದಲ್ಲಿ ಫೋಟೋಗಳನ್ನು ತೆಗೆದಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-2 ಮತ್ತು 5 ರಿಂದ 8 ರವರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-10 ರವರಿಂದ ಯಾವುದೇ ದೃಢೀಕೃತ ಪ್ರತಿಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.746/2022**

| | | |
|---|---|---|
| ಸಾಕ್ಷಿದಾರರ ಹೆಸರು | : ಹರ್ಷವರ್ದನ್ ಹೆಚ್.ಕೆ | ಪ್ರಾಸಾ-3 |
| ತಂದೆಯ ಹೆಸರು | : ಶೇಖರ್ ಪಾಲೇ ಗೌಡ | ಚಾಸಾ-12 |
| ವಯಸ್ಸು | : 33 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 21.02.2026. |
| ವಾಸಸ್ಥಳ | : ಗೋಣೀಬೀಡು ಫೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ದಿ.18.07.2021 ರಿಂದ ದಿ.16.06.2023 ರವರೆಗೆ ಕಳಸ ಫೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.08.06.2022 ರಂದು ಪ್ರಕರಣದ ಕಡತವನ್ನು ಚಾಸಾ-11 ರವರಿಂದ ಸ್ವೀಕರಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ-9 ರವರಿಂದ ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ದಿ.15.06.2022 ರಂದು ಚಾಸಾ-9 ರವರಿಗೆ ಅಮಾನುತಪಡಿಸಿಕೊಂಡು ಎಂ.ಒ.1 ರ ಕುರಿತು ಹೆಚ್ಚಿನ ಅಭಿಪ್ರಾಯವನ್ನು ನೀಡುವಂತೆ ಮನವಿಯನ್ನು ನೀಡಿರುತ್ತೇನೆ. ದಿ.22.06.2022 ರಂದು ಚಾಸಾ-9 ರವರಿಂದ ವರದಿಯನ್ನು ಸ್ವೀಕರಿಸಿಕೊಂಡಿರುತ್ತೇನೆ. ದಿ.25.06.2022 ರಂದು ಚಾಸಾ-8 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ತನಿಖೆಯು ಪೂರ್ಣಗೊಂಡಿದ್ದು ಆರೋಪಿಗಳ ವಿರುದ್ಧ ಆರೋಪವು ಸಾಬೀತಾದ ಕಾರಣ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಕೊಂಡಿರುತ್ತೇನೆ.

ಸಾಕ್ಷಿಯು ಚಾಸಾ-9 ರವರಿಂದ ಪಡೆದುಕೊಂಡು ಗಾಯದ ಪ್ರಮಾಣ ಪತ್ರ ಮತ್ತು ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪ್ರಮಾಣ ಪತ್ರವನ್ನು ನಿಪಿ-9 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಚಾಸಾ-9 ರವರಿಗೆ ಬರೆದ ಮನವಿ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-10 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ದಿ.22.06.2022 ರಂದು ಚಾಸಾ-9 ರವರು ನೀಡಿದ ವರದಿಯನ್ನು ಗುರುತಿಸಿದ್ದು, ಸದರಿ ವರದಿಯನ್ನು ನಿಪಿ-11 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್.ಕೆ.ಡಿ. ವಕೀಲರು ಶ್ರೀ ಎಂ.ಪಿ.ಎ.ಆರ್. ವಕೀಲರ ಪರವಾಗಿಃ**

ನಾನು ಚಾಸಾ-9 ರವರಿಂದ ಯಾವುದೇ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿಕೊಂಡಿರುವುದಿಲ್ಲ ಮತ್ತು ನಿಪಿ-9 ನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ

ಸರಿಯಲ್ಲ. ದಿ.15.06.2022 ರಂದು ಚಾಸಾ-9 ರವರಿಗೆ ಎಂ.ಒ.1 ರ ಬಗ್ಗೆ ಹೆಚ್ಚಿನ ವಿವರಣೆಯನ್ನು ಕೋರಿ ಮನವಿಯನ್ನು ಮಾಡಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ದಿ.22.06.2022 ರಂದು ಚಾಸಾ-9 ರವರಿಂದ ಯಾವುದೇ ವರದಿಯನ್ನು ಸ್ವೀಕರಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ದಿ.25.06.2022 ರಂದು ಚಾಸಾ-8 ರವರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗಳು ಯಾವುದೇ ಅಪರಾಧವನ್ನು ಮಾಡದಿದ್ದರೂ ಸುಳ್ಳು ದೋ.ಪ.ಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.